ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 22ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂದನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ (ನಾಲ್ಕನೇ ದಿನ) ಹಾಗೂ ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು.

ಅಭಿಯಾಚನೆ ಸಂಖ್ಯೆ	**ಅಭಿಯಾಚನೆಯ ಹೆಸರು**
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
10	ಸಮಾಜ ಕಲ್ಯಾಣ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ
20	ಲೋಕೋಪಯೋಗಿ
21	ಜಲಸಂಪನ್ಮೂಲ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ

... 2/

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎಂ. ಕೃಷ್ಣಾರೆಡ್ಡಿ, ಸುರೇಶ್‌ಗೌಡ, ವೆಂಕಟರಾವ್ ನಾಡಗೌಡ, ಬಂಡೆಪ್ಪ ಖಾಶೆಂಪೂರ್ ಹಾಗೂ ಇತರರು** – ರಾಜ್ಯದಲ್ಲಿ ನಡೆದ ಹಲವಾರು ಅಹಿತಕರ ಘಟನೆಗಳಿಂದ ಶಾಲಾ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿದ್ದು, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಕೆ.ಎಸ್. ಲಿಂಗೇಶ್, ಹೆಚ್.ಕೆ. ಕುಮಾರಸ್ವಾಮಿ, ಎಂ.ಪಿ. ಕುಮಾರಸ್ವಾಮಿ ಹಾಗೂ ಸಿ.ಎನ್. ಬಾಲಕೃಷ್ಣ ಇವರುಗಳು** – ರಾಜ್ಯದಲ್ಲಿನ ವಿವಿಧ ಭಾಗಗಳಲ್ಲಿ ಕಾಡಾನೆಗಳು ಹಾಗೂ ಇತರೆ ಕಾಡು ಪ್ರಾಣಿಗಳ ಹಾವಳಿಯಿಂದ ಉಂಟಾಗಿರುವ ಸಮಸ್ಯೆ ಹಾಗೂ ಪರಿಹಾರೋಪಾಯಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಪಿ. ರಾಜೀವ್, ಎನ್. ಮಹೇಶ್, ಗೂಳಿಹಟ್ಟಿ ಡಿ. ಶೇಖರ್, ಎಂ. ಚಂದ್ರಪ್ಪ ಹಾಗೂ ಇತರರು** – ರಾಜ್ಯದಲ್ಲಿ ಬೇಡ ಜಂಗಮ ಮತ್ತು ಬುಡಗ ಜಂಗಮ ಜಾತಿಯ ಜನಾಂಗದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡುತ್ತಿರುವುದರಿಂದ ಅರ್ಹ ಪರಿಶಿಷ್ಟ ಜಾತಿ ಜನಾಂಗದವರು ಮೀಸಲಾತಿಯಿಂದ ವಂಚಿತರಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಾ. ಅಜಯ್ ಧರ್ಮಸಿಂಗ್, ಎಂ.ಬಿ. ಪಾಟೀಲ್, ಡಿ.ಕೆ. ಶಿವಕುಮಾರ್, ಕೃಷ್ಣ ಬೈರೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸುತ್ತಿರುವ ವಿದ್ಯಮಾನಗಳಿಂದ ಕುಸಿದು ಬೀಳುತ್ತಿರುವ ಕಾನೂನು ಸುವ್ಯವಸ್ಥೆಯನ್ನು ಸರಿಪಡಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಲಾಗಿರುವ ನೊಳಂಬ ಅಧ್ಯಯನ ಪೀಠವು ಕಾರ್ಯನಿರ್ವಹಿಸಲು ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

2) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದ ಪಡುಬಿದ್ರಿ ಗ್ರಾಮದಲ್ಲಿ ಸುಝುಲಾನ್ ಸಂಸ್ಥೆಯ ಅನುಪಯುಕ್ತ ಜಾಗವನ್ನು ಕಸ ವಿಲೇವಾರಿ ಮಾಡಲು ಪಡುಬಿದ್ರಿ ಗ್ರಾಮ ಪಂಚಾಯತ್‌ಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

... 3/

3) **ಶ್ರೀ ವೀರಭದ್ರಯ್ಯ (ವೀರಣ್ಣ) ಚರಂತಿಮಠ ಅವರು** – 1998ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಮಾನದನ್ವಯ 2006ರಲ್ಲಿ ಪ್ರಕಟಿಸಲಾದ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿ ಹಾಗೂ ನಂತರ 2014 ಮತ್ತು 2019ರಲ್ಲಿ ಮರುಪ್ರಕಟಿಸಲಾದ ಆಯ್ಕೆ ಪಟ್ಟಿಗಳಲ್ಲಿ ಬದಲಾವಣೆ ಇರುವುದರಿಂದ ನಿವೃತ್ತಿ ಅಂಚಿನಲ್ಲಿರುವ ಅಭ್ಯರ್ಥಿಗಳನ್ನು ಈಗ ಅವರುಗಳು ಕಾರ್ಯನಿರ್ವಹಿಸುತ್ತಿರುವ ಇಲಾಖೆಯಲ್ಲಿಯೇ ಸೂಪರ್‌ನ್ಯೂಮರಿ ಹುದ್ದೆ ಸೃಜಿಸಿ ಮುಂದುವರೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ಹೆಚ್. ಹಾಲಪ್ಪ ಹರತಾಳು ಅವರು** – ಸಾಗರ ತಾಲ್ಲೂಕಿನ ತ್ಯಾಗರ್ತಿಯಲ್ಲಿ ಉಪಸ್ಥಾವರ, ಆನಂದಪುರದಲ್ಲಿ ಹೆಚ್ಚುವರಿ ಪರಿವರ್ತಕ ಹಾಗೂ ಹೊಸನಗರ ತಾಲ್ಲೂಕಿನ ಹರಿದ್ರಾವತಿ ಮತ್ತು ಬೈಸೆಯಲ್ಲಿ 33 ಕೆ.ವಿ. ಸ್ಟೇಶನ್‌ಗಳಲ್ಲಿ ವಿದ್ಯುತ್ ಮಂಜೂರಾತಿ ನೀಡಿ ಹಸ್ತಾಂತರಿಸಿರುವ ಜಾಗದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬ ಮಾಡುತ್ತಿರುವುದರಿಂದ ರೈತರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

5) **ಡಾ. ಕೆ. ಅನ್ನದಾನಿ ಅವರು** – ಮಳವಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ರೇಷ್ಮೆ ಬೆಳೆಗಾರರಿಗೆ ಮಂಜೂರೂ ಮಾಡಲಾದ ರೇಷ್ಮೆ ಗೂಡುಗಳ ವಿವರ, ಮಳವಳ್ಳಿ ರೇಷ್ಮೆ ಮಾರುಕಟ್ಟೆಯನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳು, ರೇಷ್ಮೆಗೆ ಬೆಂಬಲ ಬೆಲೆ ನಿಗದಿಪಡಿಸುವ ಬಗ್ಗೆ ಮತ್ತು ರೇಷ್ಮೆ ಸಾಗಾಣಿಕೆಗೆ ರೈತರಿಗೆ ಅನುಕೂಲವಾಗುವಂತೆ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ. ಮಹದೇವ್ ಅವರು** – ಪಿರಿಯಾಪಟ್ಟಣ ತಾಲ್ಲೂಕಿಗೆ ಅನುಮೋದನೆಯಾಗಿರುವ ವಿವಿಧ ವಿದ್ಯುತ್ ಉಪಕೇಂದ್ರಗಳನ್ನು ತ್ವರಿತವಾಗಿ ಸ್ಥಾಪಿಸಿ ಕೊಳವೆ ಬಾವಿಗಳನ್ನು ನಂಬಿ ವ್ಯವಸಾಯ ಮಾಡುತ್ತಿರುವ ರೈತರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

7) **ಶ್ರೀಮತಿ ಸೌಮ್ಯ ರೆಡ್ಡಿ ಅವರು** – ರಾಜ್ಯದಲ್ಲಿ ಪೋಲೀಸ್ ಸಿಬ್ಬಂದಿ ಮತ್ತು ಜನಸಂಖ್ಯೆಯ ಅನುಪಾತವು ಅಸಮಾನವಾಗಿರುವುದರಿಂದ ಖಾಲಿಯಿರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇಮಕಾತಿ ಮಾಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8) **ಶ್ರೀ ಬಿ. ಶಿವಣ್ಣ ಅವರು** – ಬೆಂಗಳೂರು ನಗರದ ಸಂಚಾರದ ದಟ್ಟಣೆಯನ್ನು ನಿಯಂತ್ರಿಸುವ ಸಲುವಾಗಿ ಫೆರಿಫೆರಲ್ ರಿಂಗ್ ರೋಡ್ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಸ್ವಾಧೀನಪಡಿಸಿಕೊಂಡಿರುವ ಜಮೀನುಗಳ ರೈತರುಗಳಿಗೆ ಪರಿಹಾರವನ್ನು ನೀಡುವ ಬಗ್ಗೆ, ಹಳೆ ಫೆರಿಫೆರಲ್ ರಸ್ತೆಯ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಹಾಗೂ ಕಾಮಗಾರಿಯನ್ನು ಪೂರ್ಣಗೊಳಿಸಲು ಸಾಧ್ಯವಾಗದಿದ್ದಲ್ಲಿ ರೈತರುಗಳಿಂದ ಭೂಸ್ವಾಧೀನ ಪಡಿಸಿಕೊಂಡಿರುವ ಭೂಮಿಯನ್ನು ಅವರುಗಳಿಗೆ ಹಿಂದಿರುಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

... 4/

9) **ಶ್ರೀಯುತರುಗಳಾದ ಎಂ.ಪಿ. ಅಪ್ಪಚ್ಚು ರಂಜನ್, ಕೆ.ಜಿ. ಬೋಪಯ್ಯ, ಸಿ.ಟಿ. ರವಿ, ಎಂ.ಪಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹಾಗೂ ಎ.ಟಿ. ರಾಮಸ್ವಾಮಿ ಅವರುಗಳು –** ರಾಜ್ಯದಲ್ಲಿ ಕಾಫಿ ಬೆಳೆಗಾರರ 10 ಹೆಚ್.ಪಿ. ಒಳಗಿನ ಮೋಟಾರ್‌ಗಳಿಗೆ ಉಚಿತ ವಿದ್ಯುತ್ ನೀಡುವ ಬಗ್ಗೆ ಹಾಗೂ ಕಾಫಿ, ಮೆಣಸು, ಏಲಕ್ಕಿ ಬೆಳೆಗಳಿಗೆ ಸರಬರಾಜು ಮಾಡುತ್ತಿರುವ ವಿದ್ಯುಚ್ಛಕ್ತಿಗೆ ವಾಣಿಜ್ಯ ದರವನ್ನು ವಿಧಿಸುತ್ತಿರುವುದರಿಂದ ಬೆಳೆಗಾರರು ಸಂಕಷ್ಟಕ್ಕೀಡಾಗಿರುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

10) **ಶ್ರೀ ಬಸನಗೌಡ ತುರುವಿಹಾಳ್ ಅವರು** – ರಾಯಚೂರು ಜಿಲ್ಲೆಯ ವಿವಿಧ ತಾಲ್ಲೂಕಿನ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಎನ್.ಆರ್.ಬಿ.ಸಿ. 5ಎ ಕಾಲುವೆಯ ಯೋಜನೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

11) **ಶ್ರೀ ಅಭಯ್ ಪಾಟೀಲ್ ಅವರು–** ರಾಜ್ಯದಲ್ಲಿ ವೈಶ್ಯವಾಣಿ ಜನಾಂಗದವರಿಗೆ ಜಾತಿ ಪ್ರಮಾಣ ಪತ್ರವನ್ನು ನೀಡದೇ ಇರುವುದರಿಂದ ವಿದ್ಯಾರ್ಥಿಗಳು ಶೈಕ್ಷಣಿಕ ಮೀಸಲಾತಿ ಸೌಲಭ್ಯದಿಂದ ವಂಚಿತರಾಗುತ್ತಿರುವ ಬಗ್ಗೆ ಹಾಗೂ ಸದರಿ ಜನಾಂಗದವರಿಗೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm